**ಕರ್ನಾಟಕ ಸರ್ಕಾರದ ನಡವಳಿಗಳು**

**ವಿಷಯ:** ಬಿ.ಪಿ.ಎಲ್ ಪಡಿತರ ಚೀಟಿಗಾಗಿ ಕುಟುಂಬಗಳ ಅರ್ಹತೆಯನ್ನು ನಿರ್ಧರಿಸಲು ಮಾನದಂಡಗಳ ಪರಿಷ್ಕರಣೆ-ಬಗ್ಗೆ.

**ಓದಲಾಗಿದೆ:** ಸರ್ಕಾರದ ಆದೇಶ ಸಂಖ್ಯೆ: ಆನಾಸ 244 ಡಿಆರ್‌ಎ 2006, ದಿನಾಂಕ: 9.10.2006.

-0-

**ಪ್ರಸ್ತಾವನೆ:**

ಮೇಲೆ ಓದಲಾದ ಆದೇಶದಲ್ಲಿ ಬಡತನ ರೇಖೆ ಕೆಳಗಿರುವ ಕುಟುಂಬಗಳನ್ನು ಗುರುತಿಸಿ ಪಡಿತರ ಚೀಟಿಗಳನ್ನು ವಿತರಿಸಲು ಹಲವು ಮಾನದಂಡಗಳನ್ನು ನಿಗದಿಪಡಿಸಿ ಆದೇಶಿಸಲಾಗಿತ್ತು. ಬಡತನ ರೇಖೆಗಿಂತ ಕೆಳಗೆ ಮತ್ತು ಬಡತನ ರೇಖೆಗಿಂತ ಮೇಲೆ ಎಂದು ವಿಭಾಗಿಸಿ, ಅರ್ಹರಿಗೆ ಬಿಪಿಎಲ್ ಪಡಿತರ ಚೀಟಿಗಳನ್ನು ನೀಡುವಲ್ಲಿ ಬಡ ಕುಟುಂಬಗಳು ಪಡಿತರ ವ್ಯವಸ್ಥೆಯಿಂದ ವಂಚಿತರಾಗುವುದನ್ನು ತಡೆಯುವ ಹಾಗೂ ಅನರ್ಹ ಕುಟುಂಬಗಳು ವ್ಯವಸ್ಥೆಯ ಲಾಭವನ್ನು ಪಡೆಯಬಾರದೆಂಬ ಉದ್ದೇಶದಿಂದ ಬಿಪಿಎಲ್ ಕುಟುಂಬಗಳನ್ನು ಗುರುತಿಸುವ ಸಲುವಾಗಿ ಹಲವು ಸುಧಾರಿತ ಮಾನದಂಡಗಳನ್ನು ನಿಗಧಿಪಡಿಸುವುದು ಅಗತ್ಯವೆಂದು ಮನಗಂಡ ಹಿನ್ನೆಲೆಯಲ್ಲಿ ಸಾರ್ವತ್ರಿಕ ಪಡಿತರ ವ್ಯವಸ್ಥೆಯಲ್ಲಿ ಸುಧಾರಣೆ ತರಲು ಉದ್ದೇಶಿಸಲಾಗಿದೆ.

ಪ್ರಸ್ತುತ: ರಾಜ್ಯದಲ್ಲಿ ಕುಟುಂಬಗಳನ್ನು, ಬಡತನ ರೇಖೆಗಿಂತ ಕೆಳಗೆ ಮತ್ತು ಬಡತನ ರೇಖೆಗಿಂತ ಮೇಲೆ ಎಂದು ವಿಭಾಗಿಸಿ ಸಾರ್ವಜನಿಕ ಪಡಿತರ ವ್ಯವಸ್ಥೆಯ ಸೌಲಭ್ಯಗಳನ್ನು ನೀಡಲಾಗುತ್ತಿದೆ. ಈ ರೀತಿ ವಿಭಾಗಿಸುವ ಸಂದರ್ಭದಲ್ಲಿ, ಬಡತನ ರೇಖೆಗಿಂತ ಮೇಲಿರುವ ಕುಟುಂಬಗಳು ಯಾವುವು ಮತ್ತು ಬಡತನ ರೇಖೆಗಿಂತ ಕೆಳಗಿರುವ ಕುಟುಂಬಗಳು ಯಾವುವು ಎಂದು ಗುರುತಿಸುವುದು ವಾಸ್ತವವಾಗಿ ಕಷ್ಟಸಾಧ್ಯವಾದ ಕೆಲಸವಾಗಿರುತ್ತದೆ. ಅದು ಮಾತ್ರವಲ್ಲದೆ ಕುಟುಂಬಗಳ, ವಾರ್ಷಿಕ ಆದಾಯ ನಗರ ಪ್ರದೇಶದಲ್ಲಿ ರೂ.17,000/- ಕ್ಕಿಂತ ಮತ್ತು ಗ್ರಾಮೀಣ ಪ್ರದೇಶದಲ್ಲಿ ರೂ.12,000/- ಕ್ಕಿಂತ ಕೆಳಗಿದ್ದರೆ ಬಡತನ ರೇಖೆಗಿಂತ ಕೆಳಗಿರುವ ಕುಟುಂಬಗಳು ಎಂದು ಸರ್ಕಾರದ ನೀತಿ ಇದ್ದರೂ ಸಹ, MNREGS ಯೋಜನೆಯಲ್ಲಿ ದಿನಗೂಲಿ ರೂ.155/- ಅನ್ನುವುದನ್ನು ಪರಿಗಣಿಸಿದಾಗ ಅದು ವಾಸ್ತವಾಂಶವಾಗಿರುವುದಿಲ್ಲ. ಆದಕಾರಣ, ಬಹಳ ಬಡಕುಟುಂಬಗಳು ಪಡಿತರ ವ್ಯವಸ್ಥೆಯಿಂದ ವಂಚಿತರಾಗಿರುತ್ತಾರೆ ಮತ್ತು ಅನರ್ಹ ಕುಟುಂಬಗಳು ವ್ಯವಸ್ಥೆಯ ಲಾಭ ಪಡೆಯುತ್ತಿದ್ದಾರೆ.

ಈ ಮೇಲಿನ ಕಾರಣಗಳಿಂದಾಗಿ ಕುಟುಂಬಗಳನ್ನು ಆರ್ಥಿಕವಾಗಿ ಸದೃಢವಾದ ಮತ್ತು ದುರ್ಬಲವಾದ ಕುಟುಂಬಗಳು ಎಂದು ಗುರುತಿಸುವುದು ಸೂಕ್ತವಾಗಿರುತ್ತದೆ. ಆರ್ಥಿಕವಾಗಿ ಸಧೃಡವಾಗಿರುವ ಕುಟುಂಬಗಳನ್ನು ಗುರುತಿಸಲು ನಿಖರವಾದ ಮಾನದಂಡವನ್ನು ನಿಗದಿಪಡಿಸಿ, ಅಂತಹ ಕುಟುಂಬಗಳಿಗೆ ಕೇಂದ್ರ ಸರ್ಕಾರವು ಸರಬರಾಜು ಮಾಡುವ ಎ.ಪಿ.ಎಲ್. ಆಹಾರಧಾನ್ಯಗಳನ್ನು ಮತ್ತು ಉಳಿದ ಎಲ್ಲಾ ಕುಟುಂಬಗಳಿಗೆ ಕೇಂದ್ರ ಸರ್ಕಾರವು ಸರಬರಾಜು ಮಾಡುವ ಬಿ.ಪಿ.ಎಲ್. ಆಹಾರಧಾನ್ಯಗಳನ್ನು ಈಗ ಪ್ರಸ್ತುತ: ಇರುವ ದರದಲ್ಲಿ ಸರಬರಾಜು ಮಾಡುವುದು ಸೂಕ್ತವಾಗಿರುತ್ತದೆ.

...2

ಆದ್ದರಿಂದ ಅರ್ಹ ಬಿಪಿಎಲ್ ಕುಟುಂಬಗಳನ್ನು ಸಾರ್ವಜನಿಕ ಪಡಿತರ ವ್ಯವಸ್ಥೆಯ ವ್ಯಾಪ್ತಿಗೆ ಒಳಪಡಿಸುವ ಉದ್ದೇಶದಿಂದ ಈ ಹಿಂದೆ ನಿಗದಿಪಡಿಸಲಾಗಿದ್ದ ಬಿಪಿಎಲ್ ಮಾನದಂಡಗಳನ್ನು ಸುಧಾರಿಸಿ ಪರಿಷ್ಕರಿಸಲು ಸರ್ಕಾರವು ತೀರ್ಮಾನಿಸಿದ್ದು, ಅದರಂತೆ ಈ ಆದೇಶ:

**ಸರ್ಕಾರದ ಆದೇಶ ಸಂಖ್ಯೆ: ಆನಾಸ 80 ಡಿಆರ್ಎ 2012, ಬೆಂಗಳೂರು, ದಿನಾಂಕ 24ನೇ ಆಗಸ್ಟ್ 2012**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ, ಆರ್ಥಿಕವಾಗಿ ಸದೃಢ ಕುಟುಂಬಗಳನ್ನು ಈ ಕೆಳಕಂಡ ಮಾನದಂಡಗಳನ್ನು ಅನುಸರಿಸಿ ಗುರುತಿಸತಕ್ಕದ್ದು:

1) ಆದಾಯ ತೆರಿಗೆ ಪಾವತಿಸುವ ಸದಸ್ಯರನ್ನು ಒಳಗೊಂಡ ಎಲ್ಲಾ ಕುಟುಂಬಗಳು.
2) ಎಲ್ಲಾ ವರ್ಗದ ಸರ್ಕಾರಿ ನೌಕರರು.
3) ಸರ್ಕಾರಿ ಸ್ವಾಮ್ಯದ ಉದ್ಯಮಗಳು/ಮಂಡಳಿಗಳು/ನಿಗಮಗಳ ಖಾಯಂ ನೌಕರರು.
4) ಸ್ವಾಯತ್ತ ಸಂಸ್ಥೆಯ/ಮಂಡಳಿಗಳ ನೌಕರರು.
5) ಸಹಕಾರ ಸಂಘಗಳ ಖಾಯಂ ಸಿಬ್ಬಂದಿಗಳು.
6) ವೃತ್ತಿಪರ ವರ್ಗಗಳು: ವೈದ್ಯರುಗಳು, ಆಸ್ಪತ್ರೆಗಳ ನೌಕರರು, ವಕೀಲರುಗಳು, ಲೆಕ್ಕ ಪರಿಶೋಧಕರುಗಳು.
7) ಸೈಕಲ್ ಮೇಲೆ ಅಥವಾ ಗಾಡಿಗಳ ಮೇಲೆ ತಳ್ಳಿಕೊಂಡು ಅಥವಾ ರಸ್ತೆಯ ಪಕ್ಕದಲ್ಲಿ ಕುಳಿತು ವ್ಯಾಪಾರ ಮಾಡುವ ಮತ್ತು ತರಕಾರಿ ಮಾತ್ರ ವ್ಯಾಪಾರ ಮಾಡುವ ಹಾಗೂ ಗೂಡಂಗಡಿಗಳಲ್ಲಿ ವ್ಯಾಪಾರ ಮಾಡುವವರನ್ನು ಹೊರತುಪಡಿಸಿ, ಉಳಿದ ಎಲ್ಲಾ ವ್ಯಾಪಾರಸ್ಥರು.
8) 3 ಹೆಕ್ಟೇರ್ (7½ ಎಕರೆ) ಒಣಭೂಮಿ ಅಥವಾ ತತ್ಸಮಾನ ನೀರಾವರಿ ಭೂಮಿ ಹೊಂದಿದವರು.
9) ಒಂದು ಆಟೋರಿಕ್ಷಾವನ್ನು ಹೊಂದಿ, ಸ್ವತ: ಓಡಿಸುತ್ತಿದ್ದು ಬೇರೆ ಆದಾಯದ ಮೂಲವಿಲ್ಲದವರನ್ನು ಹೊರತುಪಡಿಸಿ, 100 ಸಿ.ಸಿ.ಗೆ ಮೇಲ್ಪಟ್ಟ ಇಂಧನ ಚಾಲಿತ ವಾಹನಗಳನ್ನು (ದ್ವಿಚಕ್ರ, ತ್ರಿಚಕ್ರ, ಕಾರು ಇತ್ಯಾದಿ ವಾಹನ) ಹೊಂದಿರುವ ಸದಸ್ಯರನ್ನು ಒಳಗೊಂಡ ಕುಟುಂಬ.
10) ಅನುದಾನರಹಿತ ಕನ್ನಡ ಶಾಲೆಗಳ ನೌಕರರನ್ನು ಹೊರತುಪಡಿಸಿ, ಅನುದಾನಿತ/ಅನುದಾನರಹಿತ ಶಾಲಾ ಕಾಲೇಜುಗಳ ನೌಕರರು.
11) ನೊಂದಾಯಿತ ಗುತ್ತಿಗೆದಾರರು, ಎ.ಪಿ.ಎಂ.ಸಿ. ಟ್ರೇಡರ್ಸ್/ಕಮಿಷನ್ ಏಜೆಂಟ್ಸ್/ಬೀಜ ಮತ್ತು ಗೊಬ್ಬರ ಇತ್ಯಾದಿ ಡೀಲರ್ಸ್.
12) ಮನೆ/ಮಳಿಗೆ/ಕಟ್ಟಡಗಳನ್ನು ಬಾಡಿಗೆಗೆ ನೀಡಿ ವರಮಾನ ಪಡೆಯುವವರು.
13) ಪ್ರತಿ ತಿಂಗಳಿಗೆ ಸರಾಸರಿ ವಿದ್ಯುತ್ ಬಿಲ್ ರೂ.450/- ಕ್ಕಿಂತ ಮೇಲ್ಪಟ್ಟು ಪಾವತಿಸುವ ಕುಟುಂಬಗಳು.
14) ಬಹುರಾಷ್ಟ್ರೀಯ ಕಂಪನಿ, ಉದ್ದಿಮೆ/ಕೈಗಾರಿಕೆಗಳ ನೌಕರರು.

...3

ಮೇಲ್ಕಂಡಂತೆ ಗುರುತಿಸಿದ ಆರ್ಥಿಕವಾಗಿ ಸದೃಢವಾದ ಕುಟುಂಬಗಳನ್ನು ಹೊರತುಪಡಿಸಿ ಉಳಿದ ಕುಟುಂಬಗಳನ್ನು ಬಿಪಿಎಲ್ ಕಾರ್ಡನ್ನು ಹೊಂದಲು ಅರ್ಹ ಕುಟುಂಬವೆಂದು ಪರಿಗಣಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

ARV Sharma

(ಎ.ಆರ್. ವಿಜಯಾನಂದ ಶರ್ಮ)
ಸರ್ಕಾರದ ಅಧೀನ ಕಾರ್ಯದರ್ಶಿ,
ಆಹಾರ, ನಾಗರಿಕ ಸರಬರಾಜು ಮತ್ತು
ಗ್ರಾಹಕರ ವ್ಯವಹಾರಗಳ ಇಲಾಖೆ.

ಗೆ:

ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ, ಇವರಿಗೆ ಮುಂದಿನ ವಿಶೇಷ ರಾಜ್ಯಪತ್ರದಲ್ಲಿ ಪ್ರಕಟಿಸಿ, 1000 ಪ್ರತಿಗಳನ್ನು ಒದಗಿಸುವ ಸಲುವಾಗಿ.

ಪ್ರತಿಗಳು:

1) ಪ್ರಧಾನ ಮಹಾಲೇಖಪಾಲರು (ಲೆಕ್ಕಪತ್ರ) / (ಪರಿಶೋಧನೆ), ಕರ್ನಾಟಕ, ಬೆಂಗಳೂರು.
2) ಸರ್ಕಾರದ ಮುಖ್ಯಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿಗಳು.
3) ಎಲ್ಲಾ ಸರ್ಕಾರದ ಅಪರ ಮುಖ್ಯಕಾರ್ಯದರ್ಶಿಗಳ ಆಪ್ತಕಾರ್ಯದರ್ಶಿಗಳು.
4) ಎಲ್ಲಾ ಸರ್ಕಾರದ ಪ್ರಧಾನ ಕಾರ್ಯದರ್ಶಿ/ ಕಾರ್ಯದರ್ಶಿಗಳು.
5) ಮಾನ್ಯ ಮುಖ್ಯಮಂತ್ರಿಯವರ ಪ್ರಧಾನ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
6) ಮಾನ್ಯ ಉಪ ಮುಖ್ಯಮಂತ್ರಿಗಳ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌದ, ಬೆಂಗಳೂರು.
7) ಆಯುಕ್ತರು, ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆ, ಬೆಂಗಳೂರು.
8) ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಆಹಾರ ಮತ್ತು ನಾಗರಿಕ ಸರಬರಾಜು ನಿಗಮ ನಿಯಮಿತ, ಬೆಂಗಳೂರು.
9) ಎಲ್ಲಾ ಜಿಲ್ಲೆಯ ಜಿಲ್ಲಾಧಿಕಾರಿಗಳು.
10) ಹಿರಿಯ ಪ್ರಾದೇಶಿಕ ವ್ಯವಸ್ಥಾಪಕರು, ಭಾರತ ಆಹಾರ ನಿಗಮ, ಬೆಂಗಳೂರು.
11) ಎಲ್ಲಾ ಜಿಲ್ಲೆಯ ಉಪ ನಿರ್ದೇಶಕರುಗಳು, ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆ.
12) ಸರ್ಕಾರದ ಅಧೀನ ಕಾರ್ಯದರ್ಶಿಗಳು (ಸಮನ್ವಯ), ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆ.
13) ಮಾನ್ಯ ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
14) ಸರ್ಕಾರದ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆ.
15) ಸರ್ಕಾರದ ಉಪ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆ.
16) ಶಾಖಾ ರಕ್ಷಾ ಕಡತ/ವಾರದ ರಾಜ್ಯಪತ್ರ/ಹೆಚ್ಚುವರಿ ಪ್ರತಿ.